MVC No. 338/2021 PW-1

**<u>ದಿನಾಂಕ 03.08.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ :ಅರ್ಜಿದಾರರ ಪರ ವಕೀಲರಿಂದ :</u>**

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ಪ್ರಥಮ ವರ್ತಮಾನ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದೂರಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದೋಷಾರೋಪಣಾ ಪಟ್ಟಿಯ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಮಹಜರನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ವಾಹನ ತಪಾಸಣಾ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಸಂಜೀವರೆಡ್ಡಿಯಾದ ನಾನು ಪೋಲಿಸರ ಮುಂದೆ ನೀಡಿದ ಹೇಳಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಗಾಯದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಡಿಸ್ ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು (ನನ್ನ ಅಡ್ಡ ಹೆಸರು ರೆಡ್ಡಿಯಾಗಿದ್ದು ಆಸ್ಪತ್ರೆಗೆ ಸೇರಿಸಿದ ಸಂದರ್ಭದಲ್ಲಿ ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋದವರು ನೀಡಿದ ಕೆಲವು ಸಣ್ಣ ಪುಟ್ಟ ತಪ್ಪು ಮಾಹಿತಿಯನ್ನು ಡಿಸ್ ಚಾರ್ಜ್ ಸಮ್ಮರಿಯಲ್ಲಿ ಸರಿಪಡಿಸಿ ಕೆಂಪು ಶಾಹಿಯಲ್ಲಿ ಬರೆಯಲಾಗಿದೆ.), 12,264/- ರೂಗಳಿಗೆ ಸಂಬಂದಿಸಿದ 10 ವೈದ್ಯಕೀಯ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-9 ಎಂದು, ನನ್ನ ಆಧಾರ್ ಕಾರ್ಡ್ ನ ನೋಟರೈಸ್ ಪ್ರತಿಯನ್ನು ಮೂಲ ದಾಖಲಾತಿಗೆ ಹೋಲಿಸಿ ನಂತರ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು ನೋಟರೈಸ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ಸಮಯಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯವಿಚಾರಣೆಯನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ಶುಭಾ)

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.